


ಹಾಸನ ಮಲೆನಾಡು ಇಂಜಿನೀಯರಿಂಗ್ ಕಾಲೇಜಿನಲ್ಲಿ ಬೆಳಗಾಂ ವಿಶ್ವವಿದ್ಯಾಲಯ ಆದೇಶದಂತೆ ದಿನಾಂಕ 25-1-2024 ರಂದು ಮತದಾನ ಮಾಡವ ಬಗ್ಗೆ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡುವಂತಹ ಹಾಗೂ ವಿದ್ಯಾರ್ಥಿಗಳಿಗೆ ಹಾಗೂ ಕಾಲೇಜಿನ ನೌಕರರಿಗೆ ಪ್ರತಿಜ್ಞಾ ವಿಧಿ ಬೋಧಿಸುವ ಮೂಲಕ ಮತದಾನದ ಮಹತ್ವದ ಬಗ್ಗೆ ಮಲೆನಾಡು ಇಂಜಿನೀಯರಿಂಗ್ ಕಾಲೇಜಿನ ಪ್ರಾಂಶುಪಾಲರಾದ ಡಾ. ಎಸ್ ಪ್ರದೀಪ್ ರವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಅವರು ಮಾತನಾಡಿದರು.

ದೇಶದ ಎಲ್ಲರು ಮತದಾನ ಮಾಡವ ಹಕ್ಕು ನಮ್ಮದು ಅಗಿದೆ ,ನಮ್ಮ ಹಕ್ಕನ್ನು ನಾವು ಉಳಿಸಿಕೊಳ್ಳಲು ಮತದಾನ ಮಡುವುದು ಪ್ರಮುಖವಾಗಿದೆ ಎಂದು ತಿಳಿಸಿದರು. 18- ವರ್ಷ ತುಂಬಿದ ಎಲ್ಲಾರು ನಾವು ಮತದಾನ ಮಾಡವ ಮೂಲಕ ಪ್ರಜಾಪ್ರಭುತ್ವದ ಉಳಿವಿಗಾಗಿ ಸಮಾಜ ಅಭಿವೃದ್ಧಿಗೆ ಸಹಕಾರಿಯಾಗೋಣ ಎಂದರು.

ಇದೆ ಸಂದರ್ಭದಲ್ಲಿ ಮಲೆನಾಡು ಇಂಜಿನೀಯರಿಂಗ್ ಕಾಲೇಜಿನ ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ಅಧಿಕಾರಿ ಡಾ. ಹೆಚ್ ಎಸ್ ನರಸಿಂಹನ್ ವಿಧ್ಯಾರ್ಥಿಗಳಿಗೆ ಮತದಾನದ ಪ್ರತಿಜ್ಞಾ ವಿಧಿ ಬೋಧಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಸಹಾಯಕ ಆಡಳಿತಾಧಿಕಾರಿ ಪಾರ್ವತಮ್ಮ. ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಅಧಿಕಾರಿಗಳಾದ ಡಾ.ವಿಜಯ್ ಕುಮಾರ್ ತೀಲೆ. ಹಾಗೂ ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ವಿಭಾಗದ ಅಧೀಕ್ಷಕರಾದ ಶಿವಕುಮಾರ್ ವೇದಿಕೆಯಲ್ಲಿ ಇದ್ದರು. ಕಾರ್ಯಕ್ರಮದಲ್ಲಿ ಕಾಲೇಜಿನ ಡಿನ್ ರವರು, ಎಲ್ಲಾ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ನೌಕರರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.